ಅಸಲು ದಾವಾ ಸಂಖ್ಯೆ - 138/2022
ಪಿಡಬ್ಲ್ಯೂ - 01
ದಿನಾಂಕಃ 18-06-2025
ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಪಿ ಆರ್ ಕೆ ವಕೀಲರಿಂದಃ**

ಈ ದಾವೆಯಲ್ಲಿ ನಾನು 1 ನೇ ವಾದಿಯಾಗಿದ್ದು, ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

ಹೆಸರೂರ ಗ್ರಾಮದ ಸರ್ವೆ ನಂ. 174/ಎ/1/26 ರ ಉತಾರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಹೆಸರೂರ ಗ್ರಾಮ ಪಂಚಾಯತಿಯ ಆಸ್ತಿ ನಂ. 843 ರ ಭೂಮಿ ಆಕರಣೆ ಯಾದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

1 ನೇ ವಾದಿಯ ಗಂಡನ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

1 ನೇ ವಾದಿಯ ಗಂಡನ ಮತ್ತು ಅವರ ಮಗನ ಶಾಲಾ ದಾಖಲಾತಿ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-4 ಮತ್ತು 5 ಎಂದು ಗುರುತಿಸಲಾಯಿತು.

1 ನೇ ವಾದಿಯ ಮತ್ತು ಅವರ ಗಂಡನ ಮದುವೆಯ ಆಮಂತ್ರಣ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ದಿಃ 14-04-2011 ರಂದು ಪಿ ಡಿ ಓ ಹೆಸರೂರ ಗ್ರಾಮ ಪಂಚಾಯತಿ ರವರು ನೀಡಿದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ದಿಃ 05-03-2015 ರಂದು ಅಧ್ಯಕ್ಷರು ಹೆಸರೂರ ಗ್ರಾಮ ಪಂಚಾಯತಿ ರವರು ನೀಡಿದ ರಹವಾಸಿ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ದಿಃ 10-06-2015 ರಂದು ಉಪ ತಹಶೀಲ್ದಾರ ಹತ್ತಿಮತ್ತೂರ ಹೋಬಳಿ ರವರು ನೀಡಿದ ಮಂಜೂರಾತಿ ಆದೇಶ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

1 ನೇ ವಾದಿಯ ಮತ್ತು ಅವರ ಗಂಡನ ಮದುವೆಯ 6 ಭಾವ ಚಿತ್ರಗಳು ಮತ್ತು ಒಂದು ಸಿಡಿಯನ್ನು ಹಾಜರುಪಡಿಸಿದ್ದು, ಪ್ರತಿವಾದಿಪರ ವಕೀಲರ ತಕಾರಾರಿಗೆ ಒಳಪಟ್ಟು ಅವುಗಳನ್ನು ಕ್ರಮವಾಗಿ ನಿಪಿ- 10 ರಿಂದ 16 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿಕೊಂಡಂತೆ ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ, ನೀಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಸವಣೂರು